ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 14 ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 20/8/2020

ನಿಧನ ವಾರ್ತೆ

## ಮಾಜಿ ಶಾಸಕ ಸಿ.ಗುರುಸ್ವಾಮಿ



ಚಾಮರಾಜನಗರ: ಕೋವಿಡ್-19 ಪೀಡಿತರಾಗಿದ್ದ ಮಾಜಿ ಶಾಸಕ, ಬಿಜೆಪಿ ಮುಖಂಡ ಸಿ.ಗುರುಸ್ವಾಮಿ (68) ಬುಧವಾರ ಬೆಳಿಗ್ಗೆ ಮೈಸೂರಿನ ಜೆಎಸ್ಎಸ್ ಆಸ್ಪತ್ರೆಯಲ್ಲಿ ನಿಧನರಾದರು. ಇವರಿಗೆ ಪ್ಲಾಸ್ಮಾ ಚಿಕಿತ್ಸೆಯನ್ನೂ ನೀಡಲಾಗಿತ್ತು.

ಪತ್ನಿ ಶೀಲಾ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ, ಬಿಜೆಪಿ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ನಾಗಶ್ರೀ ಸೇರಿದಂತೆ ಇಬ್ಬರು ಪುತ್ರಿಯರು ಇದ್ದಾರೆ.

ಜನತಾ ಪಕ್ಷ, ಜನತಾದಳದಿಂದ ರಾಜಕೀಯ ಜೀವನ ಆರಂಭಿಸಿದ್ದರು. ಕೇಂದ್ರದ ಮಾಜಿ ಸಚಿವ ರಾಜಶೇಖರ ಮೂರ್ತಿ ಅವರ ಬೆಂಬಲಿಗರಾಗಿದ್ದ ಅವರು, ರಾಜಶೇಖರಮೂರ್ತಿ ಬಿಜೆಪಿ ಸೇರಿದಾಗ ಅವರನ್ನೇ ಹಿಂಬಾಲಿಸಿದರು. 1999ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಚಾಮರಾಜನಗರ ಕ್ಷೇತ್ರದಿಂದ ಗೆದ್ದಿದ್ದರು. ಇವರು ಚಾಮರಾಜನಗರ ಕ್ಷೇತ್ರದಿಂದ ಆಯ್ಕೆಯಾದ ಮೊದಲ ಬಿಜೆಪಿ ಶಾಸಕ.